**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.07.2025 / 2.30 p.m.**

**<><><><>**

ಮುಖ್ಯಾಂಶಗಳು

- ರಾಜ್ಯದಲ್ಲಿ ರಸಗೊಬ್ಬರ ಕೊರತೆಯಿಲ್ಲ ; ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ದೇಶಾದ್ಯಂತ ಕಾರ್ಗಿಲ್ ವಿಜಯ ದಿವಸ್ ಆಚರಣೆ ; ರಾಜ್ಯದಲ್ಲಿ ಹುತಾತ್ಮ ಯೋಧರಿಗೆ ಗೌರವ ನಮನ
- ರಾಜ್ಯದ ವಿವಿಧೆಡೆ ಧಾರಕಾರ ಮಳೆ ; ಉತ್ತರಕನ್ನಡ, ಕೊಡಗಿನಲ್ಲಿ ಜನಜೀವನ ಅಸ್ತವ್ಯಸ್ತ
- ಬೆಂಗಳೂರಿನ ಕಲಾಸಿಪಾಳ್ಯ ಬಸ್ ನಿಲ್ದಾಣಕ್ಕೆ ಜನೋಪಕಾರಿ ದೊಡ್ಡಣಶೆಟ್ಟರ ಹೆಸರು ನಾಮಕರಣ
- ನಾಳೆ ದೇಶ-ವಿದೇಶಗಳಲ್ಲಿ ಆಕಾಶವಾಣಿಯ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮ

<><><><>

ರಾಜ್ಯದಲ್ಲಿ ಯೂರಿಯಾ ಮತ್ತು ಇತರ ರಸಗೊಬ್ಬರಗಳ ಕೊರತೆಯಿಂದಾಗಿ ವ್ಯಾಪಾರಿಗಳು ದುಪ್ಪಟ್ಟು ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದ ರಾಜ್ಯದ ರೈತ ಸಮುದಾಯ ಸಂಕಷ್ಟಕ್ಕೆ ಸಿಲುಕಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಈ ಬಾರಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ರಸಗೊಬ್ಬರದ ಬೇಡಿಕೆಯೂ ಹೆಚ್ಚಿದೆ. ರಸಗೊಬ್ಬರ ಅಂಗಡಿಗಳಲ್ಲಿ ರೈತರು ಸರತಿ ಸಾಲಿನಲ್ಲಿ ನಿಂತಿರುವುದು ಕಂಡು ಬಂದಿದೆ. ಪ್ರತಿ ರೈತನಿಗೆ ೫೦ ಕೆ.ಜಿಯ ೨ ಚೀಲಗಳನ್ನು ಮಾತ್ರ ನೀಡುತ್ತಿದ್ದಾರೆ. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ. ನಡ್ಡಾ ಅವರಿಗೆ ಪತ್ರ ಬರೆದು ರೈತರ ಹಿತದೃಷ್ಟಿಯಿಂದ ರಸಗೊಬ್ಬರ ಪೂರೈಕೆ ತ್ವರಿತಗೊಳಿಸುವಂತೆ ಒತ್ತಾಯಿಸಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಹಾಸನ ಜಿಲ್ಲೆಯ ಅರಸಿಕೆರೆಯಲ್ಲಿ ೭೫೦ ಕೋಟಿಗಳಿಗೂ ಹೆಚ್ಚು ಮೊತ್ತದ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ. ಇದಕ್ಕೂ ಮೊದಲು ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ರಸಗೊಬ್ಬರ

ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಬಾರಿ ೫ ಲಕ್ಷ ಹೆಕ್ಟೇರ್ ಹೆಚ್ಚುವರಿ ಪ್ರದೇಶದಲ್ಲಿ ಬಿತ್ತನೆಯಾಗಿರುವುದರಿಂದ ಸ್ವಲ್ಪ ಮಟ್ಟಿನ ರಸಗೊಬ್ಬರ ಕೊರತೆಯಾಗಿದ್ದು, ಸರಿಪಡಿಸುವುದಾಗಿ ಭರವಸೆ ನೀಡಿದ್ದಾರೆ. ಇದೇ ವೇಳೆ ಹಾಸನ ಮಹಾನಗರ ಪಾಲಿಕೆಗೆ ಅನುದಾನ ಲಭ್ಯತೆ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಮೈಸೂರಿನ ಅಭಿವೃದ್ಧಿಗೆ ಬಿಜೆಪಿಗಿಂತ ಹೆಚ್ಚು ಕೊಡುಗೆ ನೀಡಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಗಾಳಿ ಸಹಿತ ಹೆಚ್ಚಿನ ಮಳೆಯಾಗುತ್ತಿದ್ದು, ಕಳೆದ ೨೪ ಗಂಟೆಗಳಲ್ಲಿ ೩೩ ಮಿಲಿ ಮೀಟರ್ ಮಳೆಯಾಗಿದೆ. ಕುದುರೆಮುಖ, ಶೃಂಗೇರಿ, ಕಳಸ, ಹೊರನಾಡು, ಮೂಡಿಗೆರೆ ಭಾಗಗಳಲ್ಲಿ ಹೆಚ್ಚಿನ ಮಳೆಯಾಗಿದ್ದು, ಜಿಲ್ಲೆಯ ತುಂಗಾ, ಭದ್ರಾ, ಹೇಮಾವತಿ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ನದಿಗೆ ಯಾರು ಇಳಿಯದಂತೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ.

ಕೊಡಗು ಜಿಲ್ಲೆಯಾದ್ಯಂತ ಧಾರಾಕಾರ ಮಳೆಯಾಗುತ್ತಿದ್ದು, ಕಳೆದ ೧೨ ಗಂಟೆಗಳಿಂದ ನಿರಂತರ ಮಳೆಯಾಗುತ್ತಿದೆ. ರಾತ್ರಿ ಸುರಿದ ಭಾರೀ ಮಳೆಯಿಂದಾಗಿ ಮನೆಯ ಗೋಡೆ ಕುಸಿದು ಗೃಹಿಣಿಯೋರ್ವರು ಸಾವನ್ನಪ್ಪಿದ್ದಾರೆ. ಭಾರೀ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಕೊಡಗಿನ ಹಾರಂಗಿ ಜಲಾಶಯದಿಂದ ನದಿಗೆ ೧೦ ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗಿದೆ. ಉತ್ತರಕನ್ನಡ ಜಿಲ್ಲೆಯ ಕುಮಟಾ, ಹೊನ್ನಾವರ ಸೇರಿದಂತೆ ಕರಾವಳಿ ತಾಲೂಕುಗಳಲ್ಲಿ ನಿರಂತರ ಮಳೆ ಸುರಿಯುತ್ತಿದ್ದು, ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಹಲವೆಡೆ ಕಾಳಜಿ ಕೇಂದ್ರ ತೆರೆಯಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ದಾಂಡೇಲಿ ಹಾಗೂ ಜೊಯಿಡಾ ಸೇರಿದಂತೆ ಒಟ್ಟು ಏಳು ತಾಲೂಕುಗಳ ಶಾಲಾ, ಕಾಲೇಜುಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ರಜೆ ಘೋಷಿಸಿದ್ದಾರೆ. ಕುಮಟಾ ತಾಲೂಕಿನ ಬಡಗಣಿ ಹಾಗೂ ಚಂದ್ರಪ್ರಭಾ ನದಿಗಳು ಉಕ್ಕಿ ಹರಿಯುತ್ತಿದ್ದು, ಗ್ರಾಮಸ್ಥರಲ್ಲಿ ಆತಂಕ ಹೆಚ್ಚಿಸಿದೆ. ಪ್ರವಾಹದಿಂದಾಗಿ ಊರಕೇರಿಯ ೧೭ ಕುಟುಂಬಗಳನ್ನು ಸ್ಥಳಾಂತರಿಸಲಾಗಿದೆ. ಹೊನ್ನಾವರದ ಗುಂಡಬಾಳು ನದಿ ಸಹ ಉಕ್ಕಿ ಹರಿಯುತ್ತಿದ್ದು, ಕೃಷಿ ಭೂಮಿ, ತೋಟಗಳು ಜಲಾವೃತಗೊಂಡಿದೆ. ಹೊನ್ನಾವರದಲ್ಲಿ ೧೦, ಕಾರವಾರ ಹಾಗೂ ಕುಮಟಾದಲ್ಲಿ ತಲಾ ಎರಡು ಕಾಳಜಿ ಕೇಂದ್ರ ತೆರೆಯಲಾಗಿದ್ದು,

ಸುಮಾರು ೨೫೩ ಜನ ಇದರಲ್ಲಿ ಆಶ್ರಯ ಪಡೆದಿದ್ದಾರೆ. ಹವಾಮಾನ ಇಲಾಖೆ ಉತ್ತರ ಕನ್ನಡ ಜಿಲ್ಲೆಯ ಕರಾವಳಿ ತಾಲ್ಲೂಕುಗಳಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ದಾವಣಗೆರೆ ಜಿಲ್ಲೆಯಾದ್ಯಂತ ವ್ಯಾಪಕ ಮಳೆಯಿಂದಾಗಿ ಸಾಮಾನ್ಯ ಜನ ಜೀವನ ಅಸ್ತವ್ಯಸ್ತಗೊಂಡಿದ್ದು, ಕೃಷಿ ಚಟುವಟಿಕೆಗಳಿಗೆ ಅಡ್ಡಿ ಉಂಟಾಗಿದೆ. ಭದ್ರಾ ಜಲಾಶಯಕ್ಕೆ ೨೦ ಸಾವಿರ ಕ್ಯೂಸೆಕ್‌ಗೂ ಅಧಿಕ ನೀರು ಹರಿದು ಬರುತ್ತಿದ್ದು, ಅಷ್ಟೇ ಪ್ರಮಾಣದ ನೀರನ್ನು ನದಿಗೆ ಬಿಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನದಿ ಪಾತ್ರದಲ್ಲಿ ಬರುವ ಹೊನ್ನಾಳಿ, ದಾವಣಗೆರೆ, ಹರಿಹರ, ಹರಪನಹಳ್ಳಿ ಭಾಗದ ಗ್ರಾಮಗಳ ಜನರು ಎಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚಿಸಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಳೆಯ ಆರ್ಭಟಕ್ಕೆ ನದಿ ಕೊಳ್ಳಗಳು ತುಂಬಿ ಹರಿಯುತ್ತಿದೆ. ಮಾಲತಿ ನದಿಯ ನೀರಿನ ಮಟ್ಟ ಹೆಚ್ಚಳವಾಗಿ ಶೃಂಗೇರಿ - ಹೊಸಗದ್ದೆ - ಕುಂದಾದ್ರಿ ರಸ್ತೆ ಬಂದ್ ಆಗಿದೆ. ಹಾವೇರಿ ಜಿಲ್ಲೆಯಲ್ಲಿಯೂ ನಿರಂತರವಾಗಿ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ, ವರದಾ, ಧರ್ಮ ಹಾಗೂ ಕುಮದ್ವತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿದ್ದು, ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಜಿಲ್ಲಾಡಳಿತ ಸೂಚಿಸಿದೆ. ಬ್ಯಾಡಗಿ ತಾಲ್ಲೂಕಿನ ಅತ್ತಿಕಟ್ಟೆ ಗ್ರಾಮದ ಸುಮಾರು ೧೩ ಎಕರೆ ವಿಸ್ತೀರ್ಣದ ಕೆರೆಯ ಏರಿ ಒಡೆದಿದ್ದು, ಕೆರೆಯ ನೀರು ಸಂಪೂರ್ಣ ಖಾಲಿಯಾಗಿದೆ.

<><><><>

ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಹೆಚ್ಚಿನ ನೀರು ಹರಿದು ಬರುತ್ತಿದ್ದು, ಪ್ರವಾಹದ ಭೀತಿ ಎದುರಾಗಿದೆ. ಈ ನಿಟ್ಟಿನಲ್ಲಿ ಅಣೆಕಟ್ಟೆಯಿಂದ ನದಿಗೆ ಸುಮಾರು ೩೦ರಿಂದ ೫೦ ಸಾವಿರ ಕ್ಯೂಸೆಕ್ ನೀರು ಬಿಡಲಾಗುತ್ತಿದೆ. ನದಿ ಪಾತ್ರದ ಜನತೆ ಸುರಕ್ಷಿತ ಸ್ಥಳಕ್ಕೆ ತೆರಳಬೇಕು. ಹಾಗೂ ಸಾರ್ವಜನಿಕ ಆಸ್ತಿ ರಕ್ಷಣೆ ಮತ್ತು ಜಾನುವಾರುಗಳನ್ನು ರಕ್ಷಿಸಿಕೊಳ್ಳುವಂತೆ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ಎಂಜಿನಿಯರ್ ರಘುರಾಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ ದಿವಸ ಆಚರಿಸಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನ ರಾಷ್ಟ್ರೀಯ ಸೈನಿಕ ಸ್ಮಾರಕದಲ್ಲಿ ಆಯೋಜಿಸಿದ್ದ ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಸೈನಿಕರ ತ್ಯಾಗ - ಬಲಿದಾನದ ಸಂಕೇತವಾದ ವೀರಗಲ್ಲನ್ನು ಲೋಕಾರ್ಪಣೆಗೊಳಿಸಿ ಹುತಾತ್ಮ ಯೋಧರಿಗೆ ಗೌರವ ನಮನ ಸಲ್ಲಿಸಿದರು. ಗೃಹ

ಸಚಿವ ಡಾ.ಜಿ.ಪರಮೇಶ್ವರ್, ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಸೇರಿದಂತೆ ಭಾರತೀಯ ಸೇನೆಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಹಾಸನದ ಜನರಲ್ ಕಾರ್ಯಪ್ಪ ಪಾರ್ಕ್ ನಲ್ಲಿ ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಯಿತು. ಭಾರತ ದೇಶ ಸೈನ್ಯದ ಎಲ್ಲಾ ವಿಭಾಗಗಳಲ್ಲಿ ಸಶಕ್ತವಾಗಿದೆ ಎಂಬುದಕ್ಕೆ ಅಪರೇಷನ್ ಸಿಂಧೂರ ಪ್ರತ್ಯಕ್ಷ ಸಾಕ್ಷಿಯಾಗಿದೆ ಎಂದು ಶಾಸಕ ಸ್ವರೂಪ್ ಪ್ರಕಾಶ್ ಬಣ್ಣಿಸಿದರು. ದಾವಣಗೆರೆಯಲ್ಲಿಂದು ಕಾರ್ಗಿಲ್ ವಿಜಯೋತ್ಸವ ಆಚರಿಸಲಾಯಿತು. ಜಯದೇವ ವೃತ್ತದಲ್ಲಿ ಹಮ್ಮಿಕೊಂಡಿದ್ದ ವಿಜಯೋತ್ಸವ ಕಾರ್ಯಕ್ರಮಕ್ಕೆ ವಿಧಾನಪರಿಷತ್ ಮಾಜಿ ಮುಖ್ಯ ಸಚೇತಕ ಡಾ.ಎ.ಎಚ್.ಶಿವಯೋಗಿ ಸ್ವಾಮಿ ಚಾಲನೆ ನೀಡಿದರು.

<><><>

ಬೆಂಗಳೂರಿನ ಕಲಾಸಿಪಾಳ್ಯ ಬಸ್ ನಿಲ್ದಾಣಕ್ಕೆ ಜನೋಪಕಾರಿ ದೊಡ್ಡಣ್ಣ ಶೆಟ್ಟರ ಹೆಸರು ನಾಮಕರಣ ಮಾಡಲಾಗಿದೆ. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಇಂದು ನಾಮಫಲಕ ಅನಾವರಣ ಮಾಡಿದ್ದಾರೆ. ಇದೇ ವೇಳೆ ಬಿಎಂಟಿಸಿ ಬಸ್‌ನಲ್ಲಿಯೂ ಹೊಸ ನಾಮಫಲಕ ಅಳವಡಿಸಿದ್ದು, ಬಸ್‌ಗೆ ಹಸಿರು ನಿಶಾನೆ ತೋರಿದರು. ಬಳಿಕ ಮಾತನಾಡಿದ ಅವರು, ಸಾರಿಗೆ ನೌಕರರು ಆಗಸ್ಟ್ ೫ಕ್ಕೆ ಮುಷ್ಕರ ನಡೆಸಲು ತೀರ್ಮಾನಿಸಿದ್ದು, ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚಿಸುವುದಾಗಿ ಹೇಳಿದ್ದಾರೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><><>

ಬೆಂಗಳೂರಿನ ಕಲಾಸಿಪಾಳ್ಯ ಬಸ್ ನಿಲ್ದಾಣಕ್ಕೆ ಜನೋಪಕಾರಿ ದೊಡ್ಡಣ್ಣ ಶೆಟ್ಟರ ಹೆಸರು ನಾಮಕರಣ ಮಾಡಲಾಗಿದೆ. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಇಂದು ನಾಮಫಲಕ ಅನಾವರಣ

ಮಾಡಿದ್ದಾರೆ. ಇದೇ ವೇಳೆ ಬಿಎಂಟಿಸಿ ಬಸ್‌ನಲ್ಲಿಯೂ ಹೊಸ ನಾಮಫಲಕ ಅಳವಡಿಸಿದ್ದು, ಬಸ್‌ಗೆ ಹಸಿರು ನಿಶಾನೆ ತೋರಿದರು. ಬಳಿಕ ಮಾತನಾಡಿದ ಅವರು, ಸಾರಿಗೆ ನೌಕರರು ಆಗಸ್ಟ್ ೫ಕ್ಕೆ ಮುಷ್ಕರ ನಡೆಸಲು ತೀರ್ಮಾನಿಸಿದ್ದು, ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚಿಸುವುದಾಗಿ ಹೇಳಿದ್ದಾರೆ.

**ಧ್ವನಿ : ಅರವಿಂದ ಬೆಲ್ಲದ್**

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>